ಡಾ: ಎ.ಬಿ.ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ತುರುವೇಕೆರೆ ತಾಲ್ಲೂಕು ದೊಂಬರಹಳ್ಳಿ ಗ್ರಾಮದಲ್ಲಿ ಜೂನಿಯರ್ ಕಾಲೇಜು ಪ್ರಾರಂಭಿಸುವುದು.

192(452)

ಶ್ರೀ ಲಕ್ಷ್ಮೀನಾರಾಯಣ ಎಂ.ಡಿ.(ಅಣ್ಣಯ್ಯ)(ತುರುವೇಕೆರೆ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತಿಸುವರೆ?

ಅ) ತುರುವೇಕೆರೆ ತಾಲ್ಲೂಕು ದೊಂಬರಹಳ್ಳಿ ಗ್ರಾಮದಲ್ಲಿ ಈಗಾಗಲೇ ಪ್ರೌಢಶಾಲೆ ಇದ್ದು ಕಾಲೇಜಿನ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಸದ್ರಿ ಗ್ರಾಮಕ್ಕೆ ಈ ವರ್ಷ ಕಾಲೇಜು ಮಂಜೂರು ಮಾಡಲಾಗುವುದೇ?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ) ತುರುವೇಕೆರೆ ತಾಲ್ಲೂಕಿನಲ್ಲಿ ಒಟ್ಟು 9 ಪದವಿ ಪೂರ್ವ ಕಾಲೇಜುಗಳು ಇರುವುದರಿಂದ ಮತ್ತೊಂದು ಕಾಲೇಜಿನ ಅವಶ್ಯಕತೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಅಮ್ಮಸಂದ್ರ ಗ್ರಾಮ ಪಂಚಾಯ್ತಿಯನ್ನು 2 ಪಂಚಾಯ್ತಿಗಳನ್ನಾಗಿ ವಿಂಗಡಿಸುವುದು.

193(453)

ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) (ತುರವೇಕೆರೆ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ಅಮ್ಮಸಂದ್ರ ಗ್ರಾಮ ಪಂಚಾಯಿತಿಯಲ್ಲಿ 29 ಸದಸ್ಯರಿದ್ದು, ಅನುದಾನ ನೀಡುತ್ತಿರುವುದು ಬಹಳ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಗ್ರಾಮ ಪಂಚಾಯಿತಿಯಲ್ಲಿ ಸರ್ಕಾರಿ ಡಿ ಗ್ರೂಪ್ ನೌಕರರು 20 ಕ್ಕೂ ಹೆಚ್ಚು ಇದ್ದು ಇವರಿಗೆ ಸಂಬಳ ಸರಿಯಾಗಿ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಇವರುಗಳನ್ನು ಬೇರೆ ಪಂಚಾಯಿತಿಗೆ ಅಥವಾ ಕೆಲಸಗಾರರು ಇಲ್ಲದಿರುವ ಕಡೆ ವರ್ಗಾಯಿಸಲಾಗುವುದೇ?

ಈ) ಅಮ್ಮಸಂದ್ರ ಗ್ರಾಮ ಪಂಚಾಯಿತಿಯನ್ನು 2 ಪಂಚಾಯಿತಿಗಳನ್ನಾಗಿ ವಿಂಗಡಿಸುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಪ್ರತಿ ವರ್ಷವೂ ರೂ.ಎರಡು ಲಕ್ಷಗಳನ್ನು ಗ್ರಾಮ ಪಂಚಾಯತಿಗಳಿಗೆ ಅನುದಾನವಾಗಿ ನೀಡಲಾಗುತ್ತಿದೆ. ಗ್ರಾಮ ಪಂಚಾಯತ್ ಸದಸ್ಯರ ಸಂಖ್ಯೆಯನ್ನು ಪರಿಗಣಿಸಿ ಅನುದಾನವನ್ನು ನೀಡಲಾಗುತ್ತಿಲ್ಲ.

ಆ) ಇಲ್ಲ.

ಇ) ಈ ಬಗ್ಗೆ ಯಾವುದೇ ಪ್ರಸ್ತಾವನೆಯು ಇರುವುದಿಲ್ಲ.

ಈ) ಜನಗಣತಿ ಕಾರ್ಯ ಪೂರ್ಣಗೊಂಡ ನಂತರ ಪರಿಶೀಲಿಸಲಾಗುವುದು.

ಕೇಂದ್ರದಿಂದ ರಾಜ್ಯ ಗ್ರಾಮೀಣಾಭಿವೃದ್ಧಿಗೆ ಅನುದಾನ.

194(281)

ಶ್ರೀ ನಾರಾಯಣ ಸ್ವಾಮಿ ಎ. (ಆನೇಕಲ್): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸ್ವರ್ಣ ಜಯಂತಿ ಗ್ರಾಮ ಸ್ವರಾಜ್ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯ್ತಿಗಳಿಗೆ ಅನುದಾನದ ಸೌಲಭ್ಯ ಇದೆಯೆ?